# Prime Minister to participate in the high level segment of One Ocean Summit on February 11, 2022

February 10, 2022

## ಫೆಬ್ರುವರಿ 11ರಂದು ‘ಒಂದು ಸಾಗರ ಶೃಂಗಸಭೆ’ಯ ಉನ್ನತ ಮಟ್ಟದ ವಿಭಾಗದಲ್ಲಿ ಭಾಗವಹಿಸಿ ಮಾತನಾಡಲಿರುವ ಪ್ರಧಾನಿ

ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರು ಫೆಬ್ರುವರಿ 11ರಂದು ಮಧ್ಯಾಹ್ನ 2:30ರ ಸುಮಾರಿಗೆ `ಒಂದು ಸಾಗರ ಶೃಂಗಸಭೆ’ಯ ಉನ್ನತ ಮಟ್ಟದ ವಿಭಾಗವನ್ನು ಉದ್ದೇಶಿಸಿ ವಿಡಿಯೋ ಕಾನ್ಫರೆನ್ಸ್ ಮೂಲಕ ಭಾಷಣ ಮಾಡಲಿದ್ದಾರೆ. ಶೃಂಗಸಭೆಯ ಉನ್ನತ ಮಟ್ಟದ ವಿಭಾಗವನ್ನು ಉದ್ದೇಶಿಸಿ ಜರ್ಮನಿ, ಬ್ರಿಟನ್, ದಕ್ಷಿಣ ಕೊರಿಯಾ, ಜಪಾನ್, ಕೆನಡಾ ಸೇರಿದಂತೆ ಹಲವಾರು ರಾಷ್ಟ್ರಗಳ ಮುಖ್ಯಸ್ಥರು ಮತ್ತು ಸರ್ಕಾರಗಳ ಮುಖ್ಯಸ್ಥರು ಮಾತನಾಡಲಿದ್ದಾರೆ.

ವಿಶ್ವಸಂಸ್ಥೆ ಮತ್ತು ವಿಶ್ವ ಬ್ಯಾಂಕ್ ಸಹಕಾರದೊಂದಿಗೆ ಫ್ರಾನ್ಸ್‌ನ ಬ್ರೆಸ್ಟ್‌ನಲ್ಲಿ ಫೆಬ್ರುವರಿ 9 ರಿಂದ 11 ರವರೆಗೆ ‘ಒಂದು ಸಾಗರ ಶೃಂಗಸಭೆ’ಯನ್ನು ಆಯೋಜಿಸಲಾಗಿದೆ. ಆರೋಗ್ಯಕರ ಮತ್ತು ಸುಸ್ಥಿರ ಸಾಗರ ಪರಿಸರ ವ್ಯವಸ್ಥೆಗಳನ್ನು ಸಂರಕ್ಷಿಸುವ ಮತ್ತು ಬೆಂಬಲಿಸುವ ನಿಟ್ಟಿನಲ್ಲಿ ಸ್ಪಷ್ಟ ಕ್ರಮ ಕೈಗೊಳ್ಳಲು ಅಂತರರಾಷ್ಟ್ರೀಯ ಸಮುದಾಯವನ್ನು ಸಜ್ಜುಗೊಳಿಸುವುದು ಈ ಶೃಂಗಸಭೆಯ ಉದ್ದೇಶವಾಗಿದೆ.

ನವ ದೆಹಲಿ

**ಫೆಬ್ರುವರಿ 10, 2022**

DISCLAIMER: This is an approximate translation. The original is available in English on MEA’s website and may be referred to as the official press release.